ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು.

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 4ರವರೆಗೆ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "ಖಂಡ 2ರಿಂದ 4ರವರೆಗೆ ಎರಡೂ ಸೇರಿದಂತೆ ವಿಧೇಯಕರ ಅಂಗವಾಗಿರುತ್ತದೆ."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು.

(ಖಂಡ 2ರಿಂದ 4ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಮೊದಲನೆಯ ಖಂಡ ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ " ಮೇಲ್ಕಂಡ ವಿಧೇಯಕದ ಮೊದಲನೆಯ ಖಂಡ, ಹೆಸರು ಅವತರಣಿಕೆ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ರಾಜಶೇಖರ ಮೂರ್ತಿ(ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೇ, 1993ನೇ ಸಾಲಿನ ಕರ್ನಾಟಕ ಬಾಡಿಗೆ ನಿಯಂತ್ರಣ (ಪೂರ್ವಾನ್ವಯದಿಂದ ಅವಧಿ ವಿಸ್ತರಣೆ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕೆಂದು ವಿನಂತಿ ಮಾಡಿಕೊಳ್ಳುತ್ತೇನೆ."

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ, " 1993ನೇ ಸಾಲಿನ ಕರ್ನಾಟಕ ಬಾಡಿಗೆ ನಿಯಂತ್ರಣ (ಪೂರ್ವಾನ್ವಯದಿಂದ ಅವಧಿ ವಿಸ್ತರಣೆ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು.

ಪ್ರಕಟಣೆಗಳು

ಉಪಾಧ್ಯಕ್ಷರು : ಸಣ್ಣ ಖನಿಜ ಸಂಪತ್ತಿನ ನೀತಿಯನ್ನು ಸೂಕ್ತವಾಗಿ ರೂಪಿಸುವುದನ್ನು ಖಚಿತ ಪಡಿಸಿಕೊಳ್ಳುವುದಕಾಗಿ ಸರಕಾರಕ್ಕೆ ಸಲಹೆ ನೀಡಲು ರಚಿಸಲಾದ ಉಭಯ ಸದನಗಳ ಜಂಟಿ ಸಮಿತಿಗೆ ಸಂಬಂಧಿಸಿದಂತೆ ಸಮಿತಿಯ ವರದಿಯನ್ನು ಒಪ್ಪಿಸಲು 1993ರ ಮಾರ್ಚ್ ಅಂತ್ಯದವರೆಗೆ ಕಾಲಾವಧಿಯನ್ನು ವಿಸ್ತರಿಸಲಾಗಿದೆ.

ಶ್ರೀ ವಾಟಾಳ್ ನಾಗರಾಜ್ : ಈ ಸಮಿತಿ ಏನು ಮಾಡಿದ್ದೀರಿ, ಇದಕ್ಕೆ ಅಧ್ಯಕ್ಷರೇ ಇಲ್ಲ.

ಉಪಾಧ್ಯಕ್ಷರು : ಮೊದಲು ಇದಕ್ಕೆ ಯಾರು ಅಧ್ಯಕ್ಷರಾಗಿದ್ದರು?

ಶ್ರೀ ವಾಟಾಳ್ ನಾಗರಾಜ್ : ಮೊದಲು ನಮ್ಮ ಉಸ್ತಾದ್ ರವರು ಅಧ್ಯಕ್ಷರಾಗಿದ್ದರು.

ಉಪಾಧ್ಯಕ್ಷರು : ಈಗ ಯಾರು ಸಂಬಂಧಪಟ್ಟ ಇಲಾಖೆ ಮಂತ್ರಿಗಳಾಗಿದ್ದಾರೆ ಅವರೆ ಅಧ್ಯಕ್ಷರಾಗಿರುತ್ತಾರೆ.

ಪ್ರಕಟಣೆ -2

ಸದನದ ಕಾರ್ಯಕಲಾಪಗಳ ಸಲಹಾ ಸಮಿತಿಯ ತೀರ್ಮಾನಗಳು

ಉಪಾಧ್ಯಕ್ಷರು : ದಿನಾಂಕ 6.1.93ರಂದು ಬುಧವಾದ ನಡೆದ ಸದನದ ಕಾರ್ಯಕಲಾಪಗಳ ಸಲಹಾ ಸಮಿತಿ ಸಭೆಯಲ್ಲಿ ಸದನದ ಉಪವೇಶನವನ್ನು 12ನೇ ಜನವರಿ 93ರವರೆಗೆ ವಿಸ್ತರಿಸಿ ನಿಯತ ಕಾರ್ಯಕ್ರಮಗಳನ್ನು ಒಳಗೊಂಡಂತೆ ಈ ಕೆಳಕಂಡ ಕಾರ್ಯಕ್ರಮಗಳನ್ನು ನಡೆಸಲು ತೀರ್ಮಾನಿಸಲಾಗಿದೆ.

8.1.93 ಶುಕ್ರವಾರ ಸರಕಾರಿ ಕಾರ್ಯಕಲಾಪ, ನೆರೆ ಹಾವಳಿ ಮೇಲೆ ಚರ್ಚೆ

11.1.93 ಸೋಮವಾರ ರಸಗೊಬ್ಬರದ ನೀತಿಯ ಮೇಲೆ ಚರ್ಚೆ

12.1.93 ಮಂಗಳವಾರ ಸರಕಾರಿ ಕಾರ್ಯ ಕಲಾಪ

ಉಪಾಧ್ಯಕ್ಷರು : ಈಗ ಸಭೆಯು ಮುಕ್ತಾಯವಾಗಿ ಮತ್ತೆ ನಾಳೆ ಬೆಳಗ್ಗೆ 9 ಗಂಟೆಗೆ ಸೇರುತ್ತದೆ.

(ಸದನವು 6 ಘಂಟೆ 30 ನಿಮಿಷಕ್ಕೆ ಮುಕ್ತಾಯಗೊಂಡು ಮತ್ತೆ ದಿನಾಂಕ 8.1.93ನೇ ಶುಕ್ರವಾರ ಬೆಳಗ್ಗೆ 9.00 ಗಂಟೆಗೆ ಸೇರಲು ತೀರ್ಮಾನಿಸಿತು.)

(+ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)